## ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ ದ ನ್ಯಾದಂ. ರವರ ನ್ಯಾಯಾಲಯ, ಪಿರಿಯಾಪಟ್ಟಣ.

## ಸಿ.ಸಿ. 7/2023

| | | |
|---|---|---|
| ಸಾಕ್ಷಿಯ ಹೆಸರುಃ | ಪ್ರಕಾಶ ಬಿ ಜಿ | ಪ್ರಾಸಾಃ 4 |
| ತಂದೆ ಹೆಸರುಃ | ಎಂ ಗೋಪಾಲ | ಚಾಸಾಃ 6 |
| ವಯಸ್ಸುಃ | 46 ವರ್ಷ | ಪ್ರಮಾಣೀಕರಿಸಿದ<br>ದಿಃ 17.02.2026 |
| ಉದ್ಯೋಗಃ | ಪಿ. ಐ., ರಾಜ್ಯ ಗುಪ್ತದಳ,<br>ಬೆಂಗಳೂರು | |
| ವಾಸಸ್ಥಳಃ | ಬೆಂಗಳೂರು | |

**ಮುಖ್ಯ ವಿಚಾರಣೆಃ** ಮಾನ್ಯ ಸಸಅ **ರಿಂದಃ**

ನಾನು ಜುಲೈ 2021 ರಿಂದ ಅಕ್ಟೋಬರ್ 2024 ರವರೆಗೆ ಬೈಲುಕುಪ್ಪೆ ವೃತ್ತ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿಃ21.12.2022 ರಂದು ಈ ಪ್ರಕರಣದ ಕಡತವನ್ನು ಚಾಸಾ-5 ರವರಿಂದ ಸ್ವೀಕರಿಸಿ ಪರಿಶೀಲಿಸಿರುತ್ತೇನೆ. ಅದೇ ದಿನ ಚಾಸಾ-1 ರವರ ಕರ್ತವ್ಯ ಧೃಡೀಕೃತ ಪ್ರಮಾಣ ಪತ್ರವನ್ನು ಚಾಸಾ-5 ರವರಿಂದ ಸ್ವೀಕರಿಸಿರುತ್ತೇನೆ.

3. ದಿಃ 28.12.2022 ರಂದು ಚಾಸಾ-5 ರವರಿಂದ ದಿಃ 19.12.2022 ರ ಠಾಣಾ ದಿನಚರಿಯ ದೃಢೀಕೃತ ಪ್ರತಿಯನ್ನು ಸ್ವೀಕರಿಸಿರುತ್ತೇನೆ. ಅದೇ ದಿನ ತನಿಖೆ ಪೂರೈಸಿ ಆರೋಪಿತನ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

4. ಸಾಕ್ಷಿಯು ಚಾಸಾ-1 ರವರ ಕರ್ತವ್ಯ ದೃಢೀಕರಣ ಪತ್ರದಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.5** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.5(ಎ)** ಎಂದು ಗುರುತಿಸಲಾಯಿತು. ಸಾಕ್ಷಿಯು ಠಾಣಾ ದಿನಚರಿಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು **ನಿ.ಪಿ.6** ಎಂದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು **ನಿ.ಪಿ.6(ಎ)** ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ** ಆರೋಪಿತರ **ಪರ ಶ್ರೀ.** ಕೆ ಎಸ್ **ವಕೀಲರಿಂದಃ**

5. ನಾನು ಚಾಸಾ–5 ರವರು ನೀಡಿದ ದಾಖಲೆಗಳ ಮೇರೆಗೆ ಮಾತ್ರ ಆರೋಪಿತನ ವಿರುದ್ಧ ದೋಷಾರೋಪಣಾ ಪಟ್ಟಿ ಯನ್ನು ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ. ನಾನು ತನಿಖೆಯನ್ನು ಕೈಗೊಂಡಿಲ್ಲ ಎಂದರೆ ಸರಿಯಲ್ಲ. ಆರೋಪಿತ ಶಾಲಾ ಎಸ್ ಡಿ ಎಂ ಸಿ ಯ ಅಧ್ಯಕ್ಷರಾಗಿದ್ದರು ಎಂದರೆ ನನಗೆ ಗೊತ್ತಿಲ್ಲ. ಆರೋಪಿತ ಶಾಲಾ ಆಸುಪಾಸಿನಲ್ಲಿ ಮದ್ಯದ ಬಾಟಲಿ ಬಿದ್ದಿದ್ದು ಅದನ್ನು ತಡೆಯಬೇಕೆಂದು ದೂರನ್ನು ಸಲ್ಲಿಸಿದ್ದರು ಎಂದರೆ ಸರಿಯಲ್ಲ. ಸದರಿ ದೂರಿನ ಅನ್ವಯ ನಾವು ಯಾವುದೇ ಕ್ರಮ ಕೈಗೊಳ್ಳದ ಕಾರಣ ಆರೋಪಿತ ನಮ್ಮ ವಿರುದ್ಧ ನಮ್ಮ ಮೇಲಾಧಿಕಾರಿಗಳಿಗೆ ದೂರನ್ನು ಸಲ್ಲಿಸಿದ್ದರು ಎಂದರೆ ಸರಿಯಲ್ಲ. ಆರೋಪಿತ ಯಾವುದೇ ಕ್ರಮ ಕೈಗೊಳ್ಳದ ಕಾರಣ ಮಾಧ್ಯಮಗಳಲ್ಲಿ ಚಾಸಾ–1 ಮತ್ತು 5 ರವರ ಹೇಳಿಕೆ ನೀಡುವುದಾಗಿ ತಿಳಿಸಿದ್ದರು ಎಂದರೆ ಸರಿಯಲ್ಲ. ಆ ರೀತಿ ತಿಳಿಸಿದ್ದರಿಂದ, ಆರೋಪಿತನ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿದ್ದೇವೆ ಎಂದರೆ ಸರಿಯಲ್ಲ. ಚಾಸಾ–1 ರವರು ಸುಳ್ಳು ದೂರನ್ನು ನೀಡಿದ್ದಾರೆ ಎಂದರೆ ಸರಿಯಲ್ಲ. ಚಾಸಾ–1 ರವರು ನಮ್ಮ ಸಿಬ್ಬಂದಿಯಾಗಿದ್ದರಿಂದ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆ ದಿನ ಚಾಸಾ–1 ರವರು ಕರ್ತವ್ಯಕ್ಕೆ ಹಾಜರಾಗಿರಲಿಲ್ಲ ಎಂದರೆ ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿರುವ ಎಲ್ಲಾ ಅಂಶಗಳು ಸುಳ್ಳು ಮತ್ತು ಆರೋಪಿತನಿಗೆ ತೊಂದರೆ ನೀಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿತ ಯಾವುದೇ ತಪ್ಪು ಮಾಡಿಲ್ಲ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯು ಹೇಳಿದಂತೆ ನನ್ನ ಉಕ್ತಲೇಖದಂತೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸ ಇ ಒ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾದಂ. ಪಿರಿಯಾಪಟ್ಟಣ.